ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

ಆಗು ನೀ ಅನಿಕೇತನ
BE BOUNDLESS

BENGALURU
CITY UNIVERSITY

Central College Campus, Dr. B.R AmbedkarVeedhi,
Bengaluru – 560 001.Ph.No.080-22961016 / 22131385
E-mail:registrar@bcu.ac.in

**ದಿನಾಂಕ:11.12.2023**

**ರವರಿಗೆ,**

**1.ಎಲ್ಲಾ ಕಾಲೇಜಿನ ಪ್ರಾಂಶುಪಾಲರುಗಳು,**
ಸಂಯೋಜಿತ ಕಾಲೇಜು,
ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು.

**2.ಎಲ್ಲಾ ವಿಭಾಗದ ಮುಖ್ಯಸ್ಥರುಗಳು,**
ಸೆಂಟ್ರಲ್ ಕಾಲೇಜು ಕ್ಯಾಂಪಸ್,
ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು.

**ಮಾನ್ಯರೇ,**

**ವಿಷಯ:** 2023-24ನೇ ಸಾಲಿಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಲು ಮಾಹಿತಿ ನೀಡುವ ಕುರಿತು:-

**ಉಲ್ಲೇಖ:** ಸಂ:ಸನಿ/ಸಕಇ/ಬೆಂ(ಉ)/ಸಿಬ್ಬಂದಿ/ಸಿ/ಆರ್-73/2023-24 ದಿನಾಂಕ:24.11.2023

**************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ತಮ್ಮಗಳ ಗಮನಕ್ಕೆ ತರಬಯಸುವುದೇನೆಂದರೆ, 2023-24ನೇ ಸಾಲಿಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳ ವಾರ್ಷಿಕ ಆದಾಯ ರೂ.2.5 ಲಕ್ಷದೊಳಗಿರುವ ವಿದ್ಯಾರ್ಥಿಗಳು ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಅವರುಗಳ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಜೋಡಣೆ ಮಾಡುವುದು ಕಡ್ಡಾಯವಾಗಿರುತ್ತದೆ. ಆಧಾರ್ ಸಂಖ್ಯೆಯನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಜೋಡಣೆ ಮಾಡದಿರುವ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಸಾಧ್ಯವಾಗುವುದಿಲ್ಲ.

ಆ ಕಾರಣ ಆಧಾರ್ ಸಂಖ್ಯೆಯನ್ನು ಜೋಡಣೆ ಮಾಡದಿರುವ ವಿದ್ಯಾರ್ಥಿಗಳು ಅವರುಗಳು ಹೊಂದಿರುವ ಬ್ಯಾಂಕ್ ಖಾತೆಯ ಬ್ಯಾಂಕ್‌ಗಳನ್ನು ಸಂಪರ್ಕಿಸಿ, ತುರ್ತಾಗಿ ಆಧಾರ್‌ಸಂಖ್ಯೆಯನ್ನು NPCIಗೆ ಲಿಂಕ್ ಮಾಡಿಸಲು ಜಾಗೃತಿ ಮೂಡಿಸುವಂತೆ, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ನಿರ್ದೇಶನ ನೀಡಿರುವುದರಿಂದ, ತಮ್ಮ ತಮ್ಮ ಕಾಲೇಜು/ ವಿಭಾಗಗಳಲ್ಲಿ ದಾಖಲಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಅವರುಗಳ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಜೋಡಿಸಲು ತುರ್ತಾಗಿ ನಿರ್ದೇಶನ ನೀಡಿ ಕ್ರಮ ಕೈಗೊಳ್ಳಲು ಸೂಚಿಸಿದೆ.

ಮುಂದುವರೆಯುತ್ತಾ 2022-23ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮಂಜೂರಾತಿಯಾದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನವು, ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆಯಾಗದಿರುವುದರಿಂದ ಜಮೆ ಆಗಿರುವುದಿಲ್ಲ. ಮೇಲೆ ವಿವರಿಸಿರುವ ಎಲ್ಲಾ ಕಾರಣಗಳಿಂದ ಕಾಲೇಜುಗಳಲ್ಲಿ /ವಿಭಾಗಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಜೋಡಣೆ ಮಾಡುವಂತೆ ಅರಿವು ಮೂಡಿಸಿ, ಎಲ್ಲಾ ವಿದ್ಯಾರ್ಥಿಗಳು ಆಧಾರ್ ಸಂಖ್ಯೆಯನ್ನು ಅವರುಗಳ ಬ್ಯಾಂಕ್ ಖಾತೆಗೆ ಜೋಡಣೆ ಮಾಡುವ ಬಗ್ಗೆ ತಮ್ಮಗಳ ವೈಯಕ್ತಿಕ ಗಮನ ಹರಿಸಿ ಕ್ರಮಕೈಗೊಳ್ಳಬೇಕೆಂದು ತಮ್ಮಲ್ಲಿ ಸೂಚಿಸಿದೆ.

ತಮ್ಮ ವಿಶ್ವಾಸಿ,

ಕುಲಸಚಿವರು(ಆ)

ಕುಲಸಚಿವರು
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಸೆಂಟ್ರಲ್ ಕಾಲೇಜು ಆವರಣ
ಬೆಂಗಳೂರು - 560 001

11/12/23

**ಪ್ರತಿಯನ್ನು:-**
ಅಧೀಕ್ಷಕರು, ಶೈಕ್ಷಣಿಕ ವಿಭಾಗ, ಬಿಸಿಯು ರವರಿಗೆ ಸದರಿ ಪತ್ರದ ಪ್ರತಿಯನ್ನು ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವೆಬ್ ಸೈಟ್ ಮೂಲಕ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರಿಗೆ ತಲುಪುವಂತೆ ವ್ಯವಸ್ಥೆ ಮಾಡುವುದು ಹಾಗೂ ಸೆಂಟ್ರಲ್ ಕಾಲೇಜು ಕ್ಯಾಂಪಸ್‌ನಲ್ಲಿರುವ ಎಲ್ಲಾ ವಿಭಾಗಗಳ ಮುಖ್ಯಸ್ಥರಿಗೆ ರವಾನಿಸುವುದು.